ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

**ಯರಗೇರಾ–584133, ರಾಯಚೂರು, ಕರ್ನಾಟಕ ರಾಜ್ಯ, ಭಾರತ**

ಪರೀಕ್ಷಾ ವಿಭಾಗ E-mail: registrarrur@gmail.com

ಕ್ರ.ಸಂ: ರಾವಿರಾ/ಪರೀಕ್ಷಾ/ಯು.ಜಿ/2022–23/292/ ದಿನಾಂಕ: 04.02.2023

**ಸುತ್ತೋಲೆ**

ವಿಷಯ : 2021–22ನೇ ಸಾಲಿನ ಸ್ನಾತಕ ಪದವಿಯ (NEP) ಮೊದಲನೇ ಸೆಮಿಸ್ಟರ್‌ನ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 03.02.2023

*****

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವಂತಹ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗೆ ಈ ಮೂಲಕ ತಿಳಿಸುವುದೇನೆಂದರೆ, 2021–22ನೇ ಸಾಲಿನಲ್ಲಿ ಜರುಗಿದ ರಾಷ್ಟ್ರೀಯ ಶಿಕ್ಷಣ ನೀತಿ (NEP) ಅಡಿಯ ಸ್ನಾತಕ ಬಿ.ಎ/ಬಿ.ಕಾಂ/ಬಿ.ಎಸ್ಸಿ ಮೊದಲನೇಯ ಸೆಮಿಸ್ಟರ್‌ನ ರೆಗ್ಯೂಲರ್ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಪ್ರಕಟಿಸಲಾಗಿದೆ. ಸದರಿ ಸೆಮಿಸ್ಟರ್ ಪರೀಕ್ಷಾ ಫಲಿತಾಂಶವನ್ನು ದಿನಾಂಕ : 03.02.2023 ರಿಂದ UUCMS Student Portal ಮುಖಾಂತರ ವಿದ್ಯಾರ್ಥಿಗಳು ಪಡೆದುಕೊಳ್ಳಬಹುದಾಗಿದೆ. ಸಂಬಂಧಿಸಿದ ಮಹಾವಿದ್ಯಾಲಯಗಳಿಗೆ ಪರೀಕ್ಷಾ ಫಲಿತಾಂಶದ ಸಾರಾಂಶ ಪಟ್ಟಿಯನ್ನು ಹಾಗೂ ಅಂಕಪಟ್ಟಿಯನ್ನು ನಂತರದಲ್ಲಿ ಕಳುಹಿಸಲಾಗುವುದು. ಹಾಜರಾತಿಯ, ಅಂತರಿಕ ಅಂಕಗಳು ಹಾಗೂ DSC ವಿಷಯಗಳ ಬದಲಾವಣೆ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳ ಫಲಿತಾಂಶ UUCMS ತಂತ್ರಾಂಶದಲ್ಲಿ ಪ್ರಕಟಿಸಲಾಗಿರುವುದಿಲ್ಲ. ಅಂತಹ ವಿದ್ಯಾರ್ಥಿಗಳ ಫಲಿತಾಂಶವನ್ನು ತದನಂತರದಲ್ಲಿ ಪ್ರಕಟಿಸಲಾಗುವುದು.

UUCMS ತಂತ್ರಾಂಶದ ತಾಂತ್ರಿಕ ಕಾರಣಗಳಿಂದ ಮೇಲೆ ತಿಳಿಸಿದ ಪದವಿಗಳ ಫಲಿತಾಂಶಗಳಲ್ಲಿ ವ್ಯತ್ಯಾಸಗಳು/ದೋಷಗಳು ಕಂಡುಬಂದಿರುತ್ತದೆ. ಅದ್ದರಿಂದ ಎಲ್ಲಾ ಪ್ರಾಚಾರ್ಯರುಗಳು ಜವಾಬ್ದಾರಿ ವಹಿಸಿಕೊಂಡು ತಮ್ಮ ಕಾಲೇಜಿನಲ್ಲಿ ಕಂಡು ಬಂದಿರುವಂತಹ ವ್ಯತ್ಯಾಸಗಳನ್ನು/ದೋಷಗಳನ್ನು ಕ್ರೂಢೀಕರಿಸಿ ವಿದ್ಯಾರ್ಥಿಗಳ ಪಟ್ಟಿಯನ್ನು ರಾಯಚೂರು ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗಕ್ಕೆ ಕೂಡಲೇ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ. ಈ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು ಯಾವುದೇ ವಿದ್ಯಾರ್ಥಿಗಳನ್ನು ಈ ವಿಷಯ ಸಂಬಂಧವಾಗಿ ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡದೇ ವಿಶ್ವವಿದ್ಯಾಲಯದ ಕೆಲಸಕಾರ್ಯಗಳಲ್ಲಿ ಸಹಕರಿಸಬೇಕಾಗಿ ಈ ಮೂಲಕ ಸೂಚಿಸಲಾಗಿದೆ.

(ಪ್ರೊ.ಯರಿಸ್ವಾಮಿ.ಎಂ)
ಕುಲಸಚಿವರು(ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.

ಇವರಿಗೆ,

ರಾಯಚೂರು ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲಾ ಪದವಿ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ.

ಪ್ರತಿ:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ /ಕುಲಸಚಿವರ ಅಪ್ತ ಸಹಾಯಕ ರಾಯಚೂರು ವಿಶ್ವವಿದ್ಯಾಲಯ ರಾಯಚೂರು.
2. ಕುಲಸಚಿವರು (ಮೌಲ್ಯಮಾಪನ) ಆಪ್ತ ಸಹಾಯಕ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಕಚೇರಿ ಪ್ರತಿ